# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂ. 190-ಮಂಗಮ್ಮನಪಾಳ್ಯ

## Ward DETER Commitee

ಮಾನ್ಯ ಅಧ್ಯಕ್ಷರು/ನೋಡಲ್ ಅಧಿಕಾರಿ, ಸ.ಕಾ.ನಿ.ಅ. (ಹೆಚ್.ಎಸ್.ಆರ್ ಉಪವಿಭಾಗ) ರವರು ದಿನಾಂಕ: 09.06.2021 ರಂದು ಬೆಳಿಗ್ಗೆ 11.30 ಘಂಟೆಗೆ Ward DETER Commitee ಅನ್ನು 190-ಮಂಗಮ್ಮನಪಾಳ್ಯ, ವಾರ್ಡ್ ಕಛೇರಿ (ಹೆಚ್.ಎಸ್.ಆರ್ ಉಪವಿಭಾಗ) ರಲ್ಲಿ ನಡೆಸಿದ್ದ, ವಾರ್ಡ್ ಸಮಿತಿ ಸಭೆಯ ನಡುವಳಿಗಳು.

**ಉಪಸ್ಥಿತರು:**

**ಹಾಜರಿದ್ದ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ, ಕಾರ್ಯದರ್ಶಿ, ಸದ್ಯಸರುಗಳು, ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು**

| ಕ್ರ.ಸಂ | ಹೆಸರು | ಹುದ್ದೆ | ಮೋಬೈಲ್ ಸಂಖ್ಯೆ |
|---|---|---|---|
| 1 | ಶ್ರೀ ಟಿ ಹನುಮಂತರಾಯ | ವಾರ್ಡ್ ನೋಡಲ್ ಅಧಿಕಾರಿ (ಎ.ಇ.ಇ) | 8105005285 |
| 2 | ಶ್ರೀ ರಾಮೇಗೌಡ.ಕೆ.ಎಸ್ | ಕಾರ್ಯದರ್ಶಿ, ಸಹಾಯಕ ಅಭಿಯಂತರರು ವಾರ್ಡ್ ಸಂ.190 | 7795356105 |
| 3 | ಶ್ರೀ ಸೈಯದ್ ಸಲಾಂ | ಸದಸ್ಯರು | 9035084140 |
| 4 | ಶ್ರೀ ಸುರೇಶ್ ರೆಡ್ಡಿ | ಸದಸ್ಯರು | 9900388075 |
| 5 | ಶ್ರೀ ಚಂದ್ರ ರೆಡ್ಡಿ | ಸದಸ್ಯರು | 9900115285 |
| 6 | ಶ್ರೀ ಶ್ರೀನಿವಾಸ ರೆಡ್ಡಿ | ಸದಸ್ಯರು | 9841284088 |
| 7 | ಶ್ರೀ ಗೋಪಿನಾಥ ಕೆ | ಸದಸ್ಯರು | 9243111520 |
| 8 | ಶ್ರೀ ಮೌಲಾ ಸಾಬ್ ಟಿ.ಎ. | ಸ್ವಯಂ ಸೇವಕರು | 9900034140 |
| 9 | ಶ್ರೀ ಚಾಂದ್ ಪಾಷ | ಸ್ವಯಂ ಸೇವಕರು | 9980155307 |
| 10 | ಶ್ರೀ ಯೋಗ ಸಾಯಿ ಪ್ರಕಾಶ | ಸ್ವಯಂ ಸೇವಕರು | 9886507448 |
| 11 | ಶ್ರೀ ಡಾ॥ಯೋಗೇಶ್ | ಪ್ರಾ.ಆ.ಕೇಂ (ವೈದ್ಯರು) | 9242832196 |
| 12 | ಶ್ರೀಮತಿ ಡಾ॥ ಮಹಾದೇವಿ | ವೈದ್ಯರು (ಲಸಿಕೆ ಕೇಂದ್ರ) | 9980553985 |
| 13 | ಶ್ರೀ ವಿನೋದ್.ಜಿ | ಹಿ.ಆ.ಪ ವಾ.ಸಂ: 190 | 9844629911 |
| 14 | ಶ್ರೀಮತಿ ಲಕ್ಷ್ಮೀ ಬಿ | ಸ.ಕಂ.ಅ. | 7892757079 |
| 15 | ಶ್ರೀ ಹೊನ್ನೂರ್ ಬಾಷ | ಕಿರಿಯ ಆರೋಗ್ಯ ಪರಿವೀಕ್ಷಕರು | 9945145661 |
| 16 | ಶ್ರೀ ಅಬ್ದುಲ್ ರೆಹಮಾನ್ ಬಾಲೇಬಾಯಿ | ಕಂದಾಯ ಪರಿವೀಕ್ಷಕರು | 9164404390 |

ವಾರ್ಡ್ ಅಧ್ಯಕ್ಷರು/ನೋಡಲ್ ಅಧಿಕಾರಿರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿ/ನೌಕರರನ್ನು ಸದಸ್ಯರು ಹಾಗೂ ಸ್ವಯಂ ಸೇವಕರನ್ನು ಸಭೆಗೆ ಸ್ವಾಗತಿಸುತ್ತಾ, ಹಿಂದಿನ ಸಭಾ ನಡವಳಿಯ ಪ್ರತಿ ಅಂಶದ ಬಗ್ಗೆ ಚರ್ಚಿಸಲಾಗಿದ್ದು ವಾರ್ಡ್ ವ್ಯಾಪ್ತಿಯಲ್ಲಿ ಸದ್ಯಸರು, ಸ್ವಯಂ ಸೇವಕರು ಮತ್ತು ಅಧಿಕಾರಿಗಳ ಸಹಾಕರದೊಂದಿಗೆ ರಸ್ತೆಗಳಲ್ಲಿ Sanitasation & Spraying ಔಷಧಿ ಸಿಂಪಡಿಸುವ ಕಾರ್ಯಕ್ರಮ, Testing, Tracing and Vaccination ಸಂಪರ್ಕವಾಗಿ ಸ್ಟಾಕ್ ಲಭ್ಯತೆ ಅನುಗುಣವಾಗಿ ಲಸಿಕೆ ನೀಡಲಾಗುತ್ತಿದ್ದು, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಧನ್ಯವಾದಗಳು ತಿಳಿಸುತ್ತಾ, ಕೋವಿಡ್-19 ಹರಡುವಿಕೆಯು ಈ ವಾರ್ಡ್‌ನಲ್ಲಿ ಇಳಿಮುಖವಾಗಿದೆ ಎಂದು ತಿಳಿಸಿರುತ್ತಾರೆ.

**(ಮು.ಪಿ.ನೋ)**

Scanned with

- ಹಿಂದಿನ ಸಭೆಯಲ್ಲಿ ಶ್ರೀ ಸೈಯದ್ ಸಲಾಂ ರವರು ವಾರ್ಡ್ ವ್ಯಾಪ್ತಿಯಲ್ಲಿ ಎಷ್ಟು ಜನ ಸಂಖ್ಯೆ ಕೋವಿಡ್-19 ಸಾಂಕ್ರಾಮಿಕ ರೋಗದಿಂದ ಮರಣ ಹೊಂದಿರುವವರ ದಾಖಲೆಗಳು, ಸೋಂಕಿತರ ವಿವರ ಮತ್ತು ವಿಳಾಸಗಳನ್ನು ಒದಗಿಸುವಂತೆ ಕೋರಿರುತ್ತಾರೆ. ಈ ಬಗ್ಗೆ ಇಲ್ಲಿಯವರೆಗೂ ಯಾವುದೇ ಮಾಹಿತಿ ನೀಡದೆ ಇರುವುದು ಸಭೆಯಲ್ಲಿ ಆಕ್ಷೇಪಿಸಿರುತ್ತಾರೆ. ದಾಖಲೆಗಳನ್ನು ದೃಢೀಕರಿಸಿ ನೀಡಿದ್ದಲ್ಲಿ ಮೃತಪಟ್ಟರವರ ಕುಟುಂಬದ ಸದಸ್ಯರುಗಳಿಗೆ ಆರ್ಥಿಕ ಸಹಾಯ ಮಾಡಲು ಹಾಗೂ ಕೋವಿಡ್-19 ರಿಂದ ತಂದೆ ತಾಯಿಯನ್ನು ಕಳೆದುಕೊಂಡ ಕುಟುಂಬದ ಹೆಣ್ಣು ಮಕ್ಕಳನ್ನು ದತ್ತು ಪಡೆದು ವಿದ್ಯಾಭ್ಯಾಸ ನೀಡಲು ಸಭೆಯಲ್ಲಿ ಹಾಜರಿದ್ದ ಶ್ರೀ ಸೈಯದ್ ಸಲಾಂ ರವರು ಮತ್ತು ಇತರೆ ಸದಸ್ಯರು, ಸ್ವಯಂ ಸೇವಕರು ಕೋರಿದ್ದು ಹಾಜರಿದ್ದ ವೈದ್ಯರು, ಸಹಾಯಕ ಕಂದಾಯ ಅಧಿಕಾರಿ ಮತ್ತು ಹಿರಿಯ ಆರೋಗ್ಯ ಪರೀವಿಕ್ಷಕರು ರವರುಗಳು ಧನ್ಯವಾದ ಹೇಳಿ ಮೃತರ ಪಟ್ಟಿ ಕೂಡಲೇ ಕೊಡುವುದಾಗಿ ತಿಳಿಸಿದರು.
- ಹಿಂದಿನ ಸಭೆಯಲ್ಲಿ ಶ್ರೀ ಸುರೇಶ್ ರೆಡ್ಡಿ ರವರು ಲಕ್ಷ್ಮೀ ಬಡಾವಣೆಯಲ್ಲಿ ಹಿರಿಯ ನಾಗರೀಕರು ಹೆಚ್ಚಾಗಿದ್ದು ಹಾಗೂ ಅಂಗವಿಕಲರವರು ತಮ್ಮ ಬಡಾವಣೆಯಿಂದ ಲಸಿಕಾ ಕೇಂದ್ರಕ್ಕೆ ಓಡಾಡಲು ಕಷ್ಟವಾಗಿರುವುದರಿಂದ ಈ ಪ್ರದೇಶದಲ್ಲಿ ಕನಿಷ್ಠ 3 ದಿನಗಳು ಲಸಿಕೆ ನೀಡುವುದಕ್ಕೆ Vaccination Camp ಏರ್ಪಡಿಸುವಂತೆ ಕೋರಿದ್ದು, ಇದಕ್ಕೆ ಹಾಜರಿದ್ದ ಸದ್ಯಸರು ಬೆಂಬಲಿಸಿ ಕೂಡಲೇ ಕ್ರಮ ವಹಿಸಿ ಲಸಿಕೆ ಕೇಂದ್ರವನ್ನು ಸ್ಥಾಪಿಸಲು ಹಾಜರಿದ್ದ ವೈದ್ಯಾಧಿಕಾರಿಗಳಿಗೆ ಕೋರಿದರು. ಈ ಬಗ್ಗೆ ವಾರ್ಡ್ ಸಭೆಯಲ್ಲಿ ಹಾಜರಿದ್ದ ಡಾ|| ಮಹಾದೇವಿ ರವರು ಲಸಿಕೆ ಹಾಕಲು ಉಸ್ತುವಾರಿಯಾಗಿ ನನಗೆ ನೇಮಿಸಿದ್ದು, ದಿನಾಂಕ: 10.06.2021 ರಂದು ಸ್ಟಾಕ್ ಲಭ್ಯತೆ ಅನುಗುಣವಾಗಿ ಲಸಿಕೆ ನೀಡುವುದಾಗಿ ಸಭೆಗೆ ತಿಳಿಸಿದರು.
- ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿರುವ ವಿಷಯಗಳ ಬಗ್ಗೆ ಚರ್ಚಿಸಿರುವಂತೆ ವಾರ್ಡ್ ವ್ಯಾಪ್ತಿಯಲ್ಲಿ ಲಾಕ್‌ಡೌನ್ ನಿಯಮಗಳನ್ನು ಉಲ್ಲಂಘಿಸಿ ಬೆಳಿಗ್ಗೆ 10.00 ಗಂಟೆಯ ನಂತರ ತೆರೆದಿಟ್ಟಿರುವ ಅಂಗಡಿ ಮಾಲೀಕರುಗಳಿಗೆ ನಿಯಮಗಳನ್ನು ಪಾಲಿಸುವಂತೆ ಎಚ್ಚರಿಕೆ ನೀಡಲಾಗಿದೆ. ಆದರೂ ಮುಂದುವರೆದರೆ, ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಗೆ ತಿಳಿಸಿದರು. ಸದಸ್ಯರಾದ ಶ್ರೀ ಸೈಯದ್ ಸಲಾಂ ರವರು ವಾರ್ಡ್ ಮಟ್ಟದಲ್ಲಿ ತೆರೆದಿಟ್ಟಿರುವ ಮಾಂಸದ ಅಂಗಡಿಗಳ ಮಾಲೀಕರುಗಳಿಗೆ ದಂಡ ವಿಧಿಸುವಂತೆ ಕೋರಿದರು. ಇದಕ್ಕೆ ಹಿರಿಯ ಆರೋಗ್ಯ ಪರಿವೀಕ್ಷಕರು ಕ್ರಮ ಜರುಗಿಸಿ ದಂಡ ವಿಧಿಸಲಾಗುವುದೆಂದು ಸಭೆಗೆ ತಿಳಿಸಿದರು.
- ಶ್ರೀ ಸೈಯದ್ ಸಲಾಂ ರವರು ಮತ್ತು ಇತರರು ಸಭೆಯಲ್ಲಿ ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗದಲ್ಲಿರುವ ಮಳಿಗೆಗಳನ್ನು ತೆರವುಗೊಳಿಸಲು ಕಾರ್ಯಕ್ರಮವನ್ನು ಹಮ್ಮಿಕೊಳ್ಳುವಂತೆ ಕೋರಿದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಹಾಯಕ ಅಭಿಯಂತರರು & ಹಿರಿಯ ಆರೋಗ್ಯ ಪರಿವೀಕ್ಷಕರು ಪಾದಚಾರಿ ಮಾರ್ಗವನ್ನು ತೆರವುಗೊಳಿಸಲು ದಿನಾಂಕ ನಿಗದಿಪಡಿಸಿ ಕ್ರಮ ವಹಿಸಲಾಗುವುದೆಂದು ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಒಳಚರಂಡಿ ಕಾಮಗಾರಿ ಪೂರ್ಣಗೊಂಡಿದ್ದು, ವೆಟ್‌ಮಿಕ್ಸ್ ಹಾಕದೆ ಹಾಗೂ ಅವಶೇಷಗಳನ್ನು ಸ್ಥಳದಲಿಯೇ ಬಿಟ್ಟಿರುತ್ತಾರೆ ಎಂದು ಶ್ರೀ ಸೈಯದ್ ಸಲಾಂ ರವರು ಮತ್ತು ಇತರರು ವಾರ್ಡ್ ಸಭೆಯ ಗಮನಕ್ಕೆ ತಂದಿರುತ್ತಾರೆ. ಕೂಡಲೇ ಕ್ರಮ ಕೈಗೊಳ್ಳಲುವಂತೆ ಸಭೆಗೆ ಗೈರು ಹಾಜರಾದ ಸಹಾಯಕ ಅಭಿಯಂತರರು, ಸಾಯಿಬಣ್ಣ ರವರಿಗೆ ದೂರವಾಣಿ ಮುಖಾಂತರ ನೋಡಲ್ ಅಧಿಕಾರಿ ರವರು ಸಭೆಗೆ ಗೈರು ಹಾಜರಾಗಿರುವ ಬಗ್ಗೆ ಕಾರಣಗಳನ್ನು ಕೊಡುವಂತೆ ಸೂಚಿಸಿದರು.

ಮು.ತಿ.ನೋ)

Scanned with

- ಸರ್ಕಾರದ ಆದೇಶ ಸಂಖ್ಯೆ: ಕಾಇ221 ಎಲ್ಇಟ 2021 ದಿನಾಂಕ: 28.05.2021ರನ್ವಯ ಕೋವಿಡ್-19ರ 2ನೇ ಅಲೆಯ ಲಾಕ್‌ಡೌನ್ ಜಾರಿ ಹಿನ್ನಲೆಯಲ್ಲಿ 11 ಸಂಘಟಿತ ವರ್ಗದ ಕಾರ್ಮಿಕರಿಗೆ ಪರಿಹಾರವಾಗಿ ಅರ್ಹ ಫಲಾನುಭವಿಗೆ ಸಹಾಯ ಧನ ನೀಡಲು ಕ್ರಮ ಕೈಗೊಳ್ಳಲು ವಾರ್ಡ್ ಸದಸ್ಯರು, ಸ್ವಯಂ ಸೇವಕರು ತಿಳಿಸಿರುತ್ತಾರೆ. ಈ ಬಗ್ಗೆ ಸಹಾಯಕ ಕಂದಾಯ ಅಧಿಕಾರಿ ರವರು ಅರ್ಜಿದಾರರು/ಕಾರ್ಮಿಕರು ವೃತ್ತಿ ನಿರ್ವಹಿಸುತ್ತಿರುವ ಸ್ಥಳೀಯ ಬಿ.ಬಿ.ಎಂ.ಪಿ. ವ್ಯಾಪ್ತಿಯ ಕಂದಾಯ ಅಧಿಕಾರಿ/ ಕಂದಾಯ ನಿರೀಕ್ಷಕರು ಮತ್ತು ಹಿರಿಯ ಆರೋಗ್ಯ ಪರಿವೀಕ್ಷಕ ರವರಿಂದ ದೃಡೀಕರಿಸಿಕೊಂಡು ಪ್ರಮಾಣ ಪತ್ರವನ್ನು ವಿತರಿಸಿದ ನಂತರ ಪರಿಹಾರ ಧನವನ್ನು ಪಡೆಯಲು ಆನ್‌ಲೈನ್ (ಸೇವಾ ಸಿಂದು)ವೆಬ್‌ಸೆಟ್ ಮುಖಾಂತರ ಅರ್ಜಿ ಸಲ್ಲಿಸಿ ಪಡೆಯಬಹುದಾಗಿರುತ್ತದೆ ಎಂದು ಸಹಾಯಕ ಕಂದಾಯ ಅಧಿಕಾರಿ ಶ್ರೀಮತಿ ಲಕ್ಷ್ಮೀ ಬಿ. ರವರು ತಿಳಿಸಿದರು.
- ವಾರ್ಡ್ ಸಂಖ್ಯೆ: 174ರ ಹೆಚ್.ಎಸ್.ಆರ್ ಬಡಾವಣೆಯ ಹಿರಿಯ ಆರೋಗ್ಯ ಪರಿವೀಕ್ಷಕರು ಪ್ರಭಾರದ ಮೇಲೆ ವಾರ್ಡ್ ಸಂಖ್ಯೆ: 190ರ ಮಂಗಮ್ಮನಪಾಳ್ಯ ಹೆಚ್ಚುವರಿ ಪ್ರಭಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದು, ಈ ವಾರ್ಡ್‌ಗೆ ದೈನಂದಿನ ಕೆಲಸ ಕಾರ್ಯಗಳಿಗೆ ಹಾಗೂ ಕೋವಿಡ್-19 ಸಾಂಕ್ರಾಮಿಕ ರೋಗ ನಿಯಂತ್ರಿಸಲು ಕಷ್ಟಕರವಾಗುತ್ತಿದ್ದು, ಸದರಿ ವಾರ್ಡ್‌ಗೆ ಮತ್ತೊಬ್ಬ ಹಿರಿಯ ಆರೋಗ್ಯ ಪರಿವೀಕ್ಷಕರನ್ನು ನೇಮಿಸುವಂತೆ ಶ್ರೀ ಸೈಯದ್ ಸಲಾಂ, ಶ್ರೀ ಸುರೇಶ್ ರೆಡ್ಡಿ ಮತ್ತು ಇತರೆ ಸದಸ್ಯರುಗಳು ಕ್ರಮ ಜರುಗಿಸಲು ಮೇಲಾಧಿಕಾರಿಗಳಿಗೆ ಶಿಫಾರಸ್ಸು ಮಾಡುವಂತೆ ನೋಡಲ್ ಅಧಿಕಾರಿ ರವರಿಗೆ ಸಭೆಯಲ್ಲಿ ತಿಳಿಸಿದರು.

ಮೇಲಿನ ಎಲ್ಲಾ ವಿಷಯಗಳಿಗೆ ಸಂಬಂಧಪಟ್ಟಂತೆ ಕೂಲಂಕುಷವಾಗಿ ಚರ್ಚಿಸಿ, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿದ್ದ ಎಲ್ಲಾ ಅಧಿಕಾರಿಗಳಿಗೆ ಸೂಚಿಸಿ, ಸಭೆಯನ್ನು ವಂದಾನಾರ್ಪಣೆಯೊಂದಿಗೆ ಮುಕ್ತಾಯಗೊಳಿಸಲಾಯಿತು.

9/6

ಕಾರ್ಯದರ್ಶಿ, ವಾರ್ಡ್ ನಂ.190ರ
ಸಹಾಯಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು/ನೋಡಲ್ ಅಧಿಕಾರಿ ವಾರ್ಡ್ ನಂ.190
ಮಂಗಮ್ಮನಪಾಳ್ಯ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:-**

1. ಮಾನ್ಯ ಆಡಳಿತಗಾರರು, ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ
2. ಮಾನ್ಯ ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ.ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ವಲಯ ಆಯುಕ್ತರು, ಬೊಮ್ಮನಹಳ್ಳಿ ವಲಯ ರವರ ಅವಗಾಹನೆಗಾಗಿ ಸಲ್ಲಿಸಿದೆ
4. ಮಾನ್ಯ ವಿಶೇಷ ಆಯುಕ್ತರು, (ಆಡಳಿತ) ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಜಂಟಿ ಆಯುಕ್ತರು (ಬೊಮ್ಮನಹಳ್ಳಿ ವಲಯ) ರವರ ಅವಗಾಹನೆಗಾಗಿ ಸಲ್ಲಿಸಿದೆ
6. ವಾರ್ಡ್ ಸಮಿತಿಯ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.
7. ಕಛೇರಿ ಪ್ರತಿ.

Scanned with